**ಸಿ.ಸಿ ಸಂಖ್ಯೆ: 138/2023**
**ಪಿಡಬ್ಲ್ಯೂ-1**

**ದಿನಾಂಕಃ 04.04.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**
**ಮುಂದುವರಿದ ಮುಖ್ಯ ವಿಚಾರಣೆಃ ಶ್ರೀ ಎಂ ಎನ್ ಎಸ್ ವಕೀಲರಿಂದಃ-**

ಆರೋಪಿಯು ರೂ.2,60,000 (ಎರಡು ಲಕ್ಷದ ಅರವತ್ತು ಸಾವಿರ ರೂಪಾಯಿ)ಗಳಿಗೆ ಕೊಟ್ಟಿರುವ ಕರ್ನಾಟಕ ಗ್ರಾಮೀಣ ಬ್ಯಾಂಕ್, ಕಬ್ಬಹಳ್ಳಿ ಶಾಖೆಯ ಮೂಲ ಚೆಕ್ ಸಂಖ್ಯೆ 004792 ದಿನಾಂಕಃ 03.04.2023 ಅನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ1 ಎಂದು ಗುರುತಿಸಲಾಯಿತು. ಆರೋಪಿಯ ಸಹಿಯನ್ನು ನಿಪಿ 1(ಎ) ಎಂದು ಗುರುತಿಸಲಾಯಿತು. ದಿಃ05.04.2023ರಂದು ಬ್ಯಾಂಕ್‌ನವರು ನೀಡಿದ ಹಿಂಬರವನ್ನು ಹಾಜರುಪಡಿಸಿರುತ್ತೇನೆ, ಅದನ್ನು ನಿಪಿ2 ಎಂದು, ದಿನಾಂಕಃ 13.04.2023ರಂದು ನಮ್ಮ ವಕೀಲರ ಮೂಲಕ ಆರೋಪಿಗೆ ಕಳುಹಿಸಿದ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 3 ಎಂದು, ಅಂಚೆ ರಶೀದಿ ಮತ್ತು ಸ್ವಿಕೃತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ4 ಮತ್ತು ನಿಪಿ5 ಎಂದು ಗುರುತಿಸಲಾಯಿತು.

**ಪಾಟೀ ಸವಾಲು : ಈ ಹಂತದಲ್ಲಿ ವಕೀಲರು ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದು, ಪಾಟೀ ಸವಾಲಿಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಗೆ ಉಕ್ತ ಲೇಖನ ಕೊಟ್ಟು ಓದಿ ನೋಡಿ ಸರಿಪಡಿಸಿ ನಂತರ ಮಾಡಲಾಯಿತು)

**ಓ ಹೇ ಕೇ ಸ ಇ ಎ ಒ**

**(ಎ.ಎನ್.ಕಾಂತಮ್ಮ)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ**
**ಗುಂಡ್ಲುಪೇಟೆ**